**ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್ ರವರು, ಸರ್ವೆ ನಂ. 1,2,217,216,209,208,204,203, 202,201 ಮತ್ತು 174 ಕಕ್ಕರಗೋಳ- ಗ್ರಾಮ, ಕಾರಟಗಿ- ತಾಲ್ಲೂಕು, ಕೊಪ್ಪಳ ಜಿಲ್ಲೆಯಲ್ಲಿ 60 ಎಕರೆ ಪ್ರದೇಶದಲ್ಲಿ ವರ್ಷಕ್ಕೆ 2,90,173 ಟನ್ ಗಳಷ್ಟು ಸಾಮಾನ್ಯ ಮರಳು ಗಣಿಗಾರಿಕೆಯನ್ನು ಅರೆ-ಯಾಂತ್ರಿಕೃತ ಪದ್ದತಿಯ ಪ್ರಕಾರ ಸ್ಥಾಪಿಸಲು ಉದ್ದೇಶಿಸಿರುತ್ತಾರೆ. ಇದರ ಪ್ರಯುಕ್ತ ಉದ್ದೇಶಿತ ಯೋಜನೆಯ ಸ್ಥಾಪನೆಯ ಹಿನ್ನೆಲೆಯಲ್ಲಿ ನಡೆದ ಪರಿಸರ ಸಾರ್ವಜನಿಕ ಆಲಿಕೆ ಸಭೆಯ ನಡುವಳಿಗಳು.**

ದಿನಾಂಕ : 13.05.2022

ವೇಳೆ : ಬೆಳಿಗ್ಗೆ 11:00 ಘಂಟೆ,

ಸ್ಥಳ : ಉದ್ದೇಶಿತ ಯೋಜನೆಯ ಪ್ರದೇಶ, ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್ ರವರು, ಸರ್ವೆ ನಂ. 01,02,217,216,209,208,204,203, 202,201 ಮತ್ತು 174 ಕಕ್ಕರಗೋಳ- ಗ್ರಾಮ, ಕಾರಟಗಿ- ತಾಲ್ಲೂಕು, ಕೊಪ್ಪಳ ಜಿಲ್ಲೆ.

ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್ ರವರು, ಸರ್ವೆ ನಂ.01, 02, 217, 216, 209, 208, 204, 203, 202,201 ಮತ್ತು 174 ಕಕ್ಕರಗೋಳ- ಗ್ರಾಮ, ಕಾರಟಗಿ- ತಾಲ್ಲೂಕು, ಕೊಪ್ಪಳ ಈ ಬಗ್ಗೆ ದಿನಾಂಕ: 13.05.2022 ರಂದು ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ, ಕೊಪ್ಪಳ, ಇವರ ಅಧ್ಯಕ್ಷತೆಯಲ್ಲಿ ಯೋಜನೆಯ ಸ್ಥಳದಲ್ಲಿ ನಡೆಸಿದ ಪರಿಸರ ಸಾರ್ವಜನಿಕ ಆಲಿಕೆ ಸಭೆಯ ನಡುವಳಿಗಳು.

| | |
|---|---|
| ಪರಿಸರ ಸಾರ್ವಜನಿಕ ಸಭೆ ನಡೆದ ಸ್ಥಳ | ಉದ್ದೇಶಿತ ಯೋಜನೆಯ ಪ್ರದೇಶ, ಉದ್ದೇಶಿತ ಯೋಜನೆಯ ಪ್ರದೇಶ, ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್ ರವರು, ಸರ್ವೆ ನಂ. 01, 02, 217, 216, 209, 208, 204, 203, 202,201 ಮತ್ತು 174 ಕಕ್ಕರಗೋಳ- ಗ್ರಾಮ, ಕಾರಟಗಿ- ತಾಲ್ಲೂಕು, ಕೊಪ್ಪಳ ಜಿಲ್ಲೆ. |
| ಹಾಜರಿದ್ದ ಅಧಿಕಾರಿಗಳ ವಿವರ | ಅನುಬಂಧ-1 |
| ಯೋಜನೆಯ ಪರವಾಗಿ ಹಾಜರಿದ್ದ ಪ್ರತಿನಿಧಿಗಳ ವಿವರ | ಅನುಬಂಧ-2 |
| ಭಾಗವಹಿಸಿದಂತಹ ಸಾರ್ವಜನಿಕರ ವಿವರ | ಅನುಬಂಧ-3 |
| ಪರಿಸರ ಸಾರ್ವಜನಿಕ ಸಭೆಯ ಬಗ್ಗೆ ನೀಡಿದ ಪತ್ರಿಕಾ ಪ್ರಕಟಣೆಯ ವಿವರಗಳು | ಅನುಬಂಧ-4 |
| ಶಕ್ತಿ ಬಿಂದು ಪ್ರದರ್ಶನದ ವಿವರಗಳು | ಅನುಬಂಧ-5 |
| ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಆಡಿಯೋ ಮತ್ತು ವಿಡಿಯೋ ಇರುವ ಸಿ.ಡಿ.ಗಳು. | ಅನುಬಂಧ-7 |
| ಸಾರ್ವಜನಿಕರು/ಪರಿಸರಾಸಕ್ತ ಸಂಪನ್ಮೂಲವ್ಯಕ್ತಿಗಳು ಸಲ್ಲಿಸಿದಹವಾಲುಗಳು | ಅನುಬಂಧ-8 |

ಕೇಂದ್ರ ಅರಣ್ಯ, ಪರಿಸರ ಹಾಗೂ ಆಘಾತ ಅಧ್ಯಯನ ಅಧಿಸೂಚನೆ, ಇವರು ದಿನಾಂಕ 14-09-2006 (ತಿದ್ದುಪಡಿ ದಿನಾಂಕ: 01-12-2009) ರಂದು ಹೊರಡಿಸಿರುವ ಅಧಿಸೂಚನೆ ಪ್ರಕಾರ ಸದರಿ ಯೋಜನೆಯು ಪರಿಸರ ವಿಮೋಚನಾ ಪತ್ರವನ್ನು ಪಡೆಯಬೇಕಾಗಿರುತ್ತದೆ. ಈ ನಿಟ್ಟನಲ್ಲಿ ಪರಿಸರ ಕುರಿತು ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವುದು ಕಡ್ಡಾಯವಾಗಿರುತ್ತದೆ ಹಾಗೂ ಸಭೆಯನ್ನು ಆಯೋಜಿಸುವ ಜವಾಬ್ದಾರಿಯು ಮಂಡಳಿಯದ್ದಾಗಿರುತ್ತದೆ.

ಗಣಿ ಮತ್ತು ಭೂ-ವಿಜ್ಞಾನ ಇಲಾಖೆ ಪತ್ರದ ಸಂಖ್ಯೆ: ಗಭೂಇ/ಕೊಖವಿ/ಸಾಮಗು/2020-21/2143 ದಿನಾಂಕ:24/08/2020 ರಂದು "ಸಾಮಾನ್ಯ ಮರಳು ಗಣಿಗಾರಿಕೆ" ಯೋಜನೆಯನ್ನು ಅನುಮೋಧಿಸಿ, ಒಟ್ಟು 60 ಎಕರೆ ಪ್ರದೇಶದಲ್ಲಿ ವರ್ಷಕ್ಕೆ 2,90,173 ಟನ್‌ಗಳಷ್ಟು ಸಾಮರ್ಥ್ಯದ ಮರಳು ಗಣಿಗಾರಿಕೆಯನ್ನು ಉತ್ಪಾದನೆಯ ಯೋಜನೆಯನ್ನು ಹೊಂದಿದೆ. (ಕ್ವಾರಿ ಯೋಜನೆಯ ಅವಧಿ 5 ವರ್ಷ). ಕ್ವಾರಿ ಯೋಜನೆಯನ್ನು ಅನುಮೋದಿಸಿ ವರ್ಷಕ್ಕೆ 2,90,173 ಟನ್‌ಗಳಷ್ಟು ಸಾಮರ್ಥ್ಯದ ಮರಳು ಗಣಿಗಾರಿಕೆಯನ್ನು ಉತ್ಪಾದನೆಯ ಯೋಜನೆಯನ್ನು ಹೊಂದಿದೆ.

ಕೇಂದ್ರ ಅರಣ್ಯ ಮತ್ತು ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯ, ಭಾರತ ಸರಕಾರ (ಆಘಾತ ಅಧ್ಯಯನ ವಿಭಾಗ) ನವದೆಹಲಿ, ಇವರ ಇ.ಐ.ಎ ಅಧಿಸೂಚನೆ ದಿನಾಂಕ: 14-09-2006 ರ ಪ್ರಕಾರ ಈ ಗಣಿಗಾರಿಕೆ ಯೋಜನೆಯು ಬಿ-1 ವರ್ಗವೆಂದು ಪರಿಗಣಿಸಲಾಗಿದೆ. ಯೋಜನೆ ಚಟುವಟಿಕೆ 1 (ಎ) ಇ.ಐ.ಎ ಅಧಿಸೂಚನೆ ಪರಿಸರ ಮಟ್ಟದ ಪ್ರಭಾವದ ಮೌಲ್ಯಮಾಪನ (ಇ.ಓ.ಎ) ಮತ್ತು ಪರಿಸರ ನಿರ್ವಹಣಾ ಯೋಜನೆ (ಇ.ಎಂ.ಪಿ) ನಿಯಮಗಳ ಉಲ್ಲೇಖದ (ಟಿ.ಓ.ಆರ್) ಆದಾರದ ಮೇಲೆ ಸದರಿ ಯೋಜನೆಯ Standards Terms of Reference ಅನ್ನು ದಿನಾಂಕ: 13.10.2021 ರಂದು ಅಂತಿಮಗೊಳಿಸಿ ಅದರಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯನ್ನು ಸಾರ್ವಜನಿಕ ಪರಿಸರ ಆಲಿಕೆ ಸಭೆಯನ್ನು ನಡೆಸಲು ಕೋರುವಂತೆ ಹಟ್ಟಿ ಗೋಲ್ಡ್ ಮೈನ್ಸ್ ಕಂಪನಿ ಲಿಮಿಟೆಡ್ ಇವರು ತಿಳಿಸಿರುತ್ತಾರೆ.

ಯೋಜನಾ ಪ್ರವರ್ತಕರ ಮನವಿಯ ಮೇರೆಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಜಿಲ್ಲಾಧಿಕಾರಿಗಳು, ಕೊಪ್ಪಳ ಇವರಿಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ಸೂಕ್ತ ದಿನಾಂಕ ಮತ್ತು ಸಮಯವನ್ನು ನೀಡಲು ದಿನಾಂಕ:-02-01-2021 ರಂದು ಪತ್ರದ ಮೂಲಕ ಕೋರಲಾಗಿರುತ್ತದೆ. ಅದರಂತೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವಂತೆ ಮಾನ್ಯ ಜಿಲ್ಲಾಧಿಕಾರಿಗಳು ದಿನಾಂಕ: 13.05.2022 ರಂದು ಸೂಚಿಸಿ ಸಭೆಯನ್ನು ನಡೆಸಲು ತಿಳಿಸಿರುತ್ತಾರೆ. ಆದ್ದರಿಂದ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ, ಕೊಪ್ಪಳ ಇವರ ಅಧ್ಯಕ್ಷತೆಯಲ್ಲಿ ನಡೆಸಲಾಗಿರುತ್ತದೆ.

ಇದರ ಅನ್ವಯ ಸದರಿ ವಿಸ್ತರಣಾ ಯೋಜನೆಯ ಕಾರ್ಯನಿರ್ವಹಣಾ ಸಾರಾಂಶ ವರದಿಯನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ತಯಾರಿಸಿ ಮತ್ತು ಪರಿಸರ ಆಘಾತ ಅಧ್ಯಯನ ವರದಿಯೊಂದಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಸಲ್ಲಿಸಿರುತ್ತಾರೆ. ಸದರಿ ಅಧಿಸೂಚನೆಯ ಪ್ರಕಾರ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು 30 ದಿನಗಳ ಮುಂಚೆ, ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವ ಬಗ್ಗೆ ವಿವರವನ್ನು ಸಾರ್ವಜನಿಕರಿಗೆ ತಿಳಿಸುವ ಸಂಬಂಧ ಪತ್ರಿಕಾ ಪ್ರಕಟಣೆಯನ್ನು ರಾಜ್ಯ ಮಟ್ಟದ ಪತ್ರಿಕೆಗಳಾದ "ಹೊಸ ದಿಗಂತ" (ಕನ್ನಡ) ,"ಟೈಮ್ಸ್ ಆಫ್ ಇಂಡಿಯಾ" (ಆಂಗ್ಲ ಭಾಷೆ) ಯಲ್ಲಿ ದಿನಾಂಕ: 13.04.2022 ರಂದು ಹಾಗೂ ಸ್ಥಳೀಯ

ಯೋಜನೆಯ ಸುತ್ತಮುತ್ತಲೂ ವಾಸವಾಗಿರುವ ಆಸಕ್ತ ನಿವಾಸಿಗಳು, ಪರಿಸರ ಆಸಕ್ತ ಗುಂಪುಗಳು ಮತ್ತು ಈ

ಯೋಜನೆಯಿಂದ ತೊಂದರೆಗೊಳಗಾಗುವ ಸಾರ್ವಜನಿಕರು ತಮ್ಮ ಸಲಹೆ, ಅನಿಸಿಕೆಗಳನ್ನು ಟೀಕೆ ಟಿಪ್ಪಣಿಗಳನ್ನು ಹಾಗೂ ಅಹವಾಲುಗಳನ್ನು ನೇರವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ/ಜಿಲ್ಲಾಧಿಕಾರಿಗಳು ಕೊಪ್ಪಳ ಜಿಲ್ಲೆ, ಕೊಪ್ಪಳ ಇವರಿಗೆ ಸಲ್ಲಿಸುವಂತೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿತ್ತು.

ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಯೋಜನೆಯ ಕಾರ್ಯಕಾರಿ ವರದಿ ಸಾರಾಂಶದ ಕನ್ನಡ ಮತ್ತು ಇಂಗ್ಲಿಷ್ ಪುಸ್ತಕಗಳನ್ನು ಈ ಕೆಳಗಿನ ಸರ್ಕಾರಿ ಕಛೇರಿಗಳಲ್ಲಿ ಇಡಲಾಗಿತ್ತು

- ಜಿಲ್ಲಾಧಿಕಾರಿಗಳ ಕಛೇರಿ ಕೊಪ್ಪಳ, ಜಿಲ್ಲೆ ಕೊಪ್ಪಳ
- ಮುಖ್ಯ ಕಾರ್ಯನಿರ್ವಾಕ ಕಛೇರಿ, ಜಿಲ್ಲಾ ಪಂಚಾಯತ್, ಕೊಪ್ಪಳ
- ಜಿಲ್ಲಾ ಕೈಗಾರಿಕಾ ಕೇಂದ್ರ, ಕೊಪ್ಪಳ
- ನಗರ ಸಭೆ, ಕೊಪ್ಪಳ
- ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಕೊಪ್ಪಳ
- ಸ್ಟೇಟ್ ಲೇವಲ್ ಎನ್‌ವಿರಾನ್‌ಮೆಂಟ್ ಇಮ್‌ಪ್ಯಾಕ್ಟ್ ಅಸೆಸ್‌ಮೆಂಟ್ ಅಥಾರಿಟಿ (State Level environment impact assessment authority )
- ಸಹಾಯ ವಾಣಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ– ಬೆಂಗಳೂರು
- ಗ್ರಾಮ ಪಂಚಾಯತಿ ಅಭಿವೃದಿ ಅಧಿಕಾರಿಗಳು, ಬಳಗೇರಾ– ಗ್ರಾಮ ಪಂಚಾಯತಿ

ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಯೋಜನಾ ಸ್ಥಳದಲ್ಲಿ ದಿನಾಂಕ: 13.05.2022 ರಂದು, ಮಧ್ಯಾಹ್ನ:03.00 ಘಂಟೆಗೆ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ, ಇವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

ಶ್ರೀ ಎಸ್ ಸಿ ಸುರೇಶ್, ಪರಿಸರ ಅಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ, ಕೊಪ್ಪಳ ಹಾಗೂ ಹಿರಿಯ ಪರಿಸರ ಅಧಿಕಾರಿಗಳು (ಹೆಚ್ಚುವರಿ ಪ್ರಭಾರ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ವಲಯ ಕಛೇರಿ, ಬಳ್ಳಾರಿ ಇವರು ಶ್ರೀ ವಿಕಾಸ್ ಕಿಶೋರ್ ಸುರಳ್ಕರ್ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ ರವರಿಗೆ ಮತ್ತು ಕೊಪ್ಪಳ ತಹಶೀಹಲ್ದಾರ ರವರಿಗೂ ಸಹ ಹೃತ್ಪೂರ್ವಕವಾಗಿ ಸ್ವಾಗತವನ್ನು ಕೋರಿದರು ಹಾಗೂ ಈ ಸಭೆಗೆ ಆಗಮಿಸಿದಂತಹ ಎಲ್ಲಾ ಇಲಾಖೆಯ ಅಧಿಕಾರಿಗಳನ್ನು, ಯೋಜನೆಯ ಸಿಬ್ಬಂದಿಗಳನ್ನು, ಸುತ್ತಮುತ್ತಲಿನ ಹಳ್ಳಿಯ ಸಾರ್ವಜನಿಕರನ್ನು, ಮಾಧ್ಯಮ ಪ್ರತಿನಿಧಿಗಳನ್ನು ಮತ್ತು ಪರಿಸರ ಪ್ರೇಮಿಗಳನ್ನು ಹೃತ್ಪೂರ್ವಕವಾಗಿ ಸ್ವಾಗತಿಸಿದರು. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಉದ್ದೇಶವನ್ನು ಸಭೆಗೆ ತಿಳಿಸಿ, ಯೋಜನೆಯ ಕಾರ್ಯಕಾರಿ ಸಾರಾಂಶವನ್ನು ಸಾರ್ವಜನಿಕ ಪರಾಮರ್ಶೆಗೆ ಸಂಬಂಧಪಟ್ಟ ಕಛೇರಿಗಳಲ್ಲಿ (ಎಂಟು ಕಛೇರಿಗಳು) ಇಡಲಾಗಿತ್ತು ಎಂದು ತಿಳಿಸಿದರು. ಸಭೆಯನ್ನು ಮಾನ್ಯ ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ ಇವರಿಗೆ ತಮ್ಮ ಅಧ್ಯಕ್ಷತೆಯಲ್ಲಿ ನಡೆಸಿಕೊಡಲು ವಿನಂತಿಸಿಕೊಂಡರು. ಸದರಿ ಯೋಜನೆಯ ಕಾರ್ಯಚಟುವಟಿಕೆಗಳ ಬಗ್ಗೆ ಮತ್ತು ಅಳವಡಿಸಬಹುದಾದಂತಹ ಮಾಲಿನ್ಯ ನಿಯಂತ್ರಣ ಕ್ರಮಗಳ ಬಗ್ಗೆ ವಿವರವಾದ ವರದಿಯನ್ನು ಸಾರ್ವಜನಿಕರಿಗೆ ತಿಳಿಸುವಂತೆ ಯೋಜನೆಯ ಪ್ರತಿನಿಧಿಗಳಿಗೆ ಸೂಚಿಸಿದರು.

ಸದರಿ ಯೋಜನೆಯ ಪ್ರತಿನಿಧಿಗಳು ಮತ್ತು ಯೋಜನೆಯ ಸಲಹೆಗಾರರಾದ ಮೆ: ಹಾರಿಝೂನ್ ವೆಂಚುರಿಸ್ ಇವರು ಸದರಿ ಯೋಜನೆಯ ಹಾಗೂ ಕಾರ್ಯ ಚಟುವಟಿಕೆಗಳ ಬಗ್ಗೆ ವಿವರಗಳನ್ನು ಶಕ್ತಿ ಬಿಂದು ಪ್ರದರ್ಶನದಲ್ಲಿ ಸಭೆಗೆ ತಿಳಿಸಿದರು. ಸದರಿ ವಿವರಗಳನ್ನು ಅನುಬಂಧ–5 ರಲ್ಲಿ ಲಗತ್ತಿಸಲಾಗಿದೆ.

ಸಾರ್ವಜನಿಕರು ವ್ಯಕ್ತ ಪಡಿಸಿದ ಅನಿಸಿಕೆಗಳು ಈ ಕೆಳಗಿನಂತಿವೆ.

1) **ಉಮಾ ಮಹೇಶ್ವರಪ್ಪ , ಮಾಜಿ ಗ್ರಾಮ ಪಂಚಾಯತಿ ಸದಸ್ಯರು, ಕಕ್ಕರಗೋಳ** ಇವರು ಈ ಕೆಳಗಿನಂತೆ ತಮ್ಮ ಅನಿಸಿಕೆಗಳನ್ನು ತಿಳಿಸಿದರು.
    - ಮರಳು ಗಣಿಗಾರಿಕೆ ಪ್ರದೇಶದಲ್ಲಿಯ ಗ್ರಾಮಸ್ಥರಿಗೆ ಉದ್ಯೋಗ ಅವಕಾಶವನ್ನು ನೀಡುವಂತೆ ಮನವಿ ಮಾಡಿದರು.
    - ಸ್ಥಳೀಯ ಗ್ರಾಮಸ್ಥರಿಗೆ ಮನೆ ಕಟ್ಟಲು ಮರಳು ನೀಡಬೇಕೆಂದು ಕೋರಿದರು.
    - ಸ್ಥಳೀಯ ಗ್ರಾಮಗಳಲ್ಲಿರುವಂತಹ ವಾಹನಗಳನ್ನು ಮರಳನ್ನು ಸಾಗಿಸಲು ಬಾಡಿಗೆಗಾಗಿ ತೆಗೆದುಕೊಳ್ಳುವಂತೆ ಕೋರಿದರು.
2) **ಹೊನ್ನೂರು ಸಾಬ ಕಕ್ಕರಗೋಳ** ಇವರು ಈ ಕೆಳಗಿನಂತೆ ತಮ್ಮ ಅನಿಸಿಕೆಗಳನ್ನು ತಿಳಿಸಿದರು.
    - ಮರಳು ಗಣಿಗಾರಿಕೆ ಪ್ರದೇಶದಲ್ಲಿಯ ಗ್ರಾಮಸ್ಥರಿಗೆ ಉದ್ಯೋಗ ಅವಕಾಶವನ್ನು ನೀಡುವಂತೆ ಮನವಿ ಮಾಡಿದರು.
    - ಮರಳು ಗಣಿಗಾರಿಕೆ ಕಾರ್ಯಾಚರಣೆ ಮಾಡಲು ನಮ್ಮಿಂದ ಯಾವುದೇ ಅಭ್ಯಂತರವಿರುವುದಿಲ್ಲ ಎಂದು ತಿಳಿಸಿದರು.
    - ಸ್ಥಳೀಯ ಗ್ರಾಮಸ್ಥರಿಗೆ ಮನೆ ಕಟ್ಟಲು ಮರಳು ನೀಡಬೇಕೆಂದು ಕೋರಿದರು.
3) **ಬುಳ್ಳಪ್ಪ ನಾಯಕ್, ಮಾಜಿ ಗ್ರಾಮ ಪಂಚಾಯತಿ ಸದಸ್ಯರು, ಕಕ್ಕರಗೋಳ,** ಇವರು ಈ ಕೆಳಗಿನಂತೆ ತಮ್ಮ ಅನಿಸಿಕೆಗಳನ್ನು ತಿಳಿಸಿದರು.
    - ಮರಳು ಗಣಿಗಾರಿಕೆ ಪ್ರದೇಶದಲ್ಲಿಯ ಗ್ರಾಮಸ್ಥರಿಗೆ ಉದ್ಯೋಗ ಅವಕಾಶವನ್ನು ನೀಡುವಂತೆ ಮನವಿ ಮಾಡಿದರು.
    - ಮರಳು ಗಣಿಗಾರಿಕೆ ಕಾರ್ಯಾಚರಣೆ ಮಾಡಲು ನಮ್ಮಿಂದ ಯಾವುದೇ ಅಭ್ಯಂತರವಿರುವುದಿಲ್ಲ ಎಂದು ತಿಳಿಸಿದರು.
    - ಸ್ಥಳೀಯ ಗ್ರಾಮಸ್ಥರಿಗೆ ಮನೆ ಕಟ್ಟಲು ಮರಳು ನೀಡಬೇಕೆಂದು ಕೋರಿದರು.
    - ಗ್ರಾಮದ ರಸ್ತೆಗಳನ್ನು ದುರಸ್ಥಿ ಮಾಡಿ ಕೊಡುವಂತೆ ಕೋರಿದರು.

4) **ಬಸಪ್ಪ ನಾಯಕ್ ಕಕ್ಕರಗೋಳ,** ಇವರು ಈ ಕೆಳಗಿನಂತೆ ತಮ್ಮ ಅನಿಸಿಕೆಗಳನ್ನು ತಿಳಿಸಿದರು.
    - ಮರಳು ಗಣಿಗಾರಿಕೆ ಕಾರ್ಯಾಚರಣೆ ಮಾಡಲು ನಮ್ಮಿಂದ ಯಾವುದೇ ಅಭ್ಯಂತರವಿರುವುದಿಲ್ಲ ಎಂದು ತಿಳಿಸಿದರು.
    - ಸ್ಥಳೀಯ ಗ್ರಾಮಸ್ಥರಿಗೆ ಮನೆ ಕಟ್ಟಲು ಮರಳು ನೀಡಬೇಕೆಂದು ಕೋರಿದರು.

5) **ಉಮಾ ಮಹೇಶ್ವರಪ್ಪ , ಮಾಜಿ ಗ್ರಾಮ ಪಂಚಾಯತಿ ಸದಸ್ಯರು, ಕಕ್ಕರಗೋಳ** ಇವರು ಈ ಕೆಳಗಿನಂತೆ ತಮ್ಮ ಅನಿಸಿಕೆಗಳನ್ನು ತಿಳಿಸಿದರು.
    - ಮರಳು ಗಣಿಗಾರಿಕೆ ಕಾರ್ಯಾಚರಣೆ ಮಾಡಲು ನಮ್ಮಿಂದ ಯಾವುದೇ ಅಭ್ಯಂತರವಿರುವುದಿಲ್ಲ ಎಂದು ತಿಳಿಸಿದರು.
    - ನಮ್ಮ ಹೊಲ ನಮ್ಮ ದಾರಿ ಯೋಜನೆ ಅಡಿಯಲ್ಲಿ ಗ್ರಾಮದ ರಸ್ತೆಗಳನ್ನು ದುರಸ್ಥಿ ಮಾಡಿ ಕೊಡುವಂತೆ ಕೋರಿದರು.

6) **ಜಮೀರ ಅಮ್ಮದ್, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಕ್ಕರಗೋಳ** ಇವರು ಈ ಕೆಳಗಿನಂತೆ ತಮ್ಮ ಅನಿಸಿಕೆಗಳನ್ನು ತಿಳಿಸಿದರು.

- ನಮ್ಮ ಹೊಲ ನಮ್ಮ ದಾರಿ ಯೋಜನೆ ಅಡಿಯಲ್ಲಿ ಗ್ರಾಮದ ರಸ್ತೆಗಳನ್ನು ದುರಸ್ಥಿ ಮಾಡಲು ಮಂಜೂರಾತಿ ನೀಡಿರುವುದಿಲ್ಲ.
- ಮುಂದಿನ ವರ್ಷದಲ್ಲಿ ನಮ್ಮ ಹೊಲ ನಮ್ಮ ದಾರಿ ಯೋಜನೆ ಅಡಿಯಲ್ಲಿ ರಸ್ತೆಗಳನ್ನು ದುರಸ್ಥಿ ಕಾರ್ಯವನ್ನು ಮಾಡಲಾಗುವುದು.

ಡಾ॥ ಸಾರ್ವಭೌಮ ಎಸ್. ಬಗಲಿ, ಮಾಜಿ ಶಾಸಕರು (2008–13) ಇಂಡಿ ತಾಲೂಕು, ಬಿಜಾಪೂರ– ಜಿಲ್ಲೆ, ರವರು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಸದರಿ ಮರಳು ಗಣಿಗಾರಿಕೆಯಲ್ಲಿ ಭಾರಿಯಂತ್ರಗಳಿಂದ ಅರೆಯಾಂತ್ರಿಕೃತ ಪದ್ಧತಿಯಲ್ಲಿ ಗಣಿಗಾರಿಕೆ ಮಾಡಲು ಉದ್ದೇಶಿಸಿರುವುದನ್ನು ದಿನಾಂಕ: 23.05.2022 ರಂದು ದಿನ ಪತ್ರಿಕೆಯಲ್ಲಿ ಪ್ರಕಟವಾಗಿರುವುದನ್ನು ಗಮನಿಸಿರುತ್ತೇನೆ ಆದುದರಿಂದ ಸದರಿ ಮರಳು ಗಣಿಗಾರಿಕೆ ಪ್ರದೇಶದಲ್ಲಿ ಭಾರಿ ಯಂತ್ರಗಳಾದ ಜೆಸಿಬಿ/ಇಟಾಚಿ ಇವುಗಳಿಂದ ಗಣಿಗಾರಿಕೆ ಮಾಡಲು ಅವಕಾಶ ನೀಡಬಾರದು ಎಂದು ಲಿಖಿತ ರೂಪದಲ್ಲಿ ತಿಳಿಸಿರುತ್ತಾರೆ. ಮರಳು ಗಣಿಗಾರಿಕೆಗೆ ಅವಕಾಶ ನೀಡಿದ್ದಲ್ಲಿ ನ್ಯಾಯಾಲಯದ ಮೊರೆಹೊಗಲಾಗುವುದು ಎಂದು ತಿಳಿಸಿರುತ್ತಾರೆ.

ಅಧ್ಯಕ್ಷರು ಪರಿಸರ ಅಧಿಕಾರಿಗಳಿಗೆ ಸಾರ್ವಜನಿಕ ಅಭಿಪ್ರಾಯಗಳನ್ನು ಮೌಖಿಕ ಮತ್ತು ಲಿಖಿತ ಹೇಳಿಕೆಗಳನ್ನು ಕ್ರೂಢಿಕರಿಸಿ ಕನ್ನಡ ಮತ್ತು ಇಂಗ್ಲೀಷ್‌ನಲ್ಲಿ ನಡುವಳಿಗಳನ್ನು ತಯಾರಿಸಲು ಸೂಚಿಸಿದರು ಮತ್ತು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

- ಗಣಿಗಾರಿಕೆಯ ಪ್ರದೇಶದ ಪರಿಸರ ಸಲಹೆಗಾರರು/ಯೋಜನೆಯ ಪ್ರತಿಪಾದಕರು ಗಣಿಗಾರಿಕೆಯ ಮುಚ್ಚುವ ಯೋಜನೆ ಅಳವಡಿಸಿಕೊಳ್ಳುವುದು ಮತ್ತು ಗಣಿಗಾರಿಕೆಯ ಮುಚ್ಚುವ ಯೋಜನೆಯನ್ನು ತಪ್ಪದೇ ಅನುಷ್ಠಾನಗೊಳಿಸುವುದು.
- ಗಣಿಗಾರಿಕೆ ಚಟುವಟಿಕೆಯಿಂದ ಸಾರ್ವಜನಿಕರಿಗೆ ತೊಂದರೆ ಉಂಟಾದಲ್ಲಿ ಗ್ರಾಮಸ್ಥರು ಜಿಲ್ಲಾಧಿಕಾರಿಗಳ ಕಚೇರಿಗೆ ತಮ್ಮ ಮನವಿಯನ್ನು ಸಲ್ಲಿಸಲು ಸೂಚಿಸಿದರು.
- ಗ್ರಾಮಸ್ಥರ ಅಹವಾಲುಗಳಿಗೆ ಅಧ್ಯಕ್ಷರು ಪರಿಸರ ಸಲಹೆಗಾರರಿಗೆ ಗಣಿಗಾರಿಕೆಯಿಂದ ಅಂತರ್ಜಲ ಮಟ್ಟಕ್ಕೆ ಪ್ರಭಾವ ಬೀರುವುದೇ ಎಂದು ತಿಳಿಸಿದರು. ಅದರಂತೆ ಪರಿಸರ ಸಲಹೆಗಾರರು ಸಲ್ಲಿಸಿರುವ ಗಣಿಗಾರಿಕೆಯ ಯೋಜನೆಯಂತೆ 1 ಮೀಟರ್ ಆಳದವರೆಗೆ ಮರಳು ಗಣಿಗಾರಿಕೆಯನ್ನು ನಡೆಸಲಾಗುವುದು, ಅದ್ದರಿಂದ ಅಂತರ್ಜಲದ ನೀರಿನ ಮಟ್ಟಕ್ಕೆ ಯಾವುದೇ ತೊಂದರೆಯಾಗುವುದಿಲ್ಲ ಎಂದು ತಿಳಿಸಿದರು.
- ಸರ್ಕಾರದ ನಿಯಮದಂತೆ ಮರಳು ಗಣಿಗಾರಿಕೆಯ ಯೋಜನೆಯ ಪ್ರತಿಪಾದಕರು ರಾಜಧನವನ್ನು ಸರ್ಕಾರಕ್ಕೆ ಕಡ್ಡಾಯವಾಗಿ ಪಾವತಿಸಬೇಕಾಗಿರುತ್ತದೆ. ಆದ್ದರಿಂದ ಉಚಿತವಾಗಿ ಮರಳನ್ನು ನೀಡಲು ಅವಕಾಶವಿರುವುದಿಲ್ಲ.

ಅಧ್ಯಕ್ಷರು ಪರಿಸರ ಅಧಿಕಾರಿಗಳಿಗೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲು ಸೂಚಿಸುತ್ತಾ ಸಾರ್ವಜನಿಕ ಆಲಿಕೆ ಸಭೆಯನ್ನು ಮುಕ್ತಾಯಗೊಳಿಸಿ ನಡುವಳಿಗಳನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಲು ಸೂಚಿಸಿದರು.

(ವಿಕಾಸ್ ಕಿಶೋರ್ ಸುರಳ್ಕರ್ ಭಾ.ಆ.ಸೇ.)
ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು
ಪರಿಸರ ಸಾರ್ವಜನಿಕ ಆಲಿಕೆ ಸಭೆ ಕೊಪ್ಪಳ